ಸದನದಲ್ಲಿ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ನೂರ ನಲವತ್ತೊಂದನೆಯ ಅಧಿವೇಶನ

ಮಂಗಳವಾರ, ದಿನಾಂಕ: 29ನೇ ಸೆಪ್ಟೆಂಬರ್, 2020

ಡಿ.ಸಿ.ಸಿ. ಮತ್ತು ಸಹಕಾರ ಬ್ಯಾಂಕ್‌ಗಳಲ್ಲಿನ ಹಗರಣಗಳ ಕುರಿತು

ಶ್ರೀ ಕೆ.ಸಿ. ಕೊಂಡಯ್ಯ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) -

ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) -

94 (1066+1113) ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದ ವಿವಿಧ ಡಿ.ಸಿ.ಸಿ. ಬ್ಯಾಂಕ್‌ಗಳು ಮತ್ತು ಸಹಕಾರ ಬ್ಯಾಂಕ್‌ಗಳಲ್ಲಿ ನಡೆದಿರುವ ಹಣಕಾಸಿನ ಹಗರಣಗಳ ಪ್ರಕರಣಗಳು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಆ ಬ್ಯಾಂಕುಗಳು ಯಾವುವು; (ಕಳೆದ 2 ವರ್ಷಗಳ ಬ್ಯಾಂಕ್ ಮಾಹಿತಿ ನೀಡುವುದು)

(ಆ) ಈ ಬ್ಯಾಂಕುಗಳಲ್ಲಿ ಎಷ್ಟು ಜನ ಫಿಕ್ಸೆಡ್ ಡಿಪಾಜಿಟ್ ಮಾಡಿದ್ದು, ಮದುವೆ ಮುಂತಾದ ಸಮಾರಂಭಗಳಿಗೆ ಹಣ ವಾಪಸ್ ಪಡೆಯಲು ಸಾಧ್ಯವಾಗದೆ ಪ್ರತಿಭಟನೆಗಳನ್ನು ಮಾಡುತ್ತಿದ್ದು ಗ್ರಾಹಕರ ಹಿತರಕ್ಷಣೆಗೆ ಸರ್ಕಾರ ಯಾವ ಕ್ರಮ ಕೈಗೊಂಡಿದೆ;

(ಇ) ಅಕ್ರಮಗಳನ್ನು ನಡೆಸಿರುವ ಸಹಕಾರಿ ಬ್ಯಾಂಕುಗಳ ಮೇಲೆ ಯಾವ ರೀತಿಯ ಕ್ರಮಗಳನ್ನು ಸರ್ಕಾರ ಕೈಗೊಂಡಿದೆ?